**FEBRUARY 17, 2025**

**AKASHAVANI - DHARWAD**

**PRADESH SAAMACHARA (KANNADA) 12 PM**

ಬಾಗಲಕೋಟೆ ಜಿಲ್ಲೆ, ಮುಧೋಳ ತಾಲೂಕು, ರನ್ನ ಬೆಳಗಲಿಯಲ್ಲಿ ಒಂದು ದಿನ ಹಾಗೂ ಮುಧೋಳ ಪಟ್ಟಣದಲ್ಲಿ ಎರಡು ದಿನ, ರನ್ನ ವೈಭವ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ಸಿದ್ಧತೆಗೆ, ವಿವಿಧ ಸಮಿತಿಗಳನ್ನು ರಚಿಸಲಾಗಿದೆ ಎಂದು, ಜಿಲ್ಲಾಧಿಕಾರಿ ಕೆ.ಎಂ. ಜಾನಕಿ ತಿಳಿಸಿದ್ದಾರೆ. ರನ್ನ ವೈಭವ ಯಶಸ್ವಿ ಹಾಗೂ ಅದ್ದೂರಿಯಾಗಿ ನಡೆಸಲು, ಒಟ್ಟು 24 ಸಮಿತಿ ರಚಿಸಲಾಗಿದೆ. ಮೂರು ದಿನಗಳ ಉತ್ಸವದಲ್ಲಿ ಕವಿ ಚಕ್ರವರ್ತಿ ರನ್ನನ ಸಾಹಿತ್ಯ ಕುರಿತು, ವಿಚಾರಗೋಷ್ಠಿ ಹಾಗೂ ಕವಿಗೋಷ್ಠಿ ನಡೆಯಲಿವೆ ಎಂದರು.

ಮಹಾತ್ಮ ಗಾಂಧಿ ನರೇಗಾ ಯೋಜನೆ ಅಡಿ, ಶಾಲಾ ಅಭಿವೃದ್ಧಿ ಕಾಮಗಾರಿಗಳಿಗೆ ವಿಶೇಷ ಆದ್ಯತೆ ನೀಡುವುದಾಗಿ, ಬೆಳಗಾವಿ ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ. ರಾಹುಲ್ ಶಿಂಧೆ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೆಲಸ ನೀಡಿ, ಮಾರ್ಚ–2025ರ ಅಂತ್ಯದೊಳಗಾಗಿ ನೀಡಿದ ಗುರಿಗೆ ಅನುಗುಣವಾಗಿ ಪ್ರಗತಿ ಸಾಧಿಸಬೇಕು ಎಂದು ಸೂಚಿಸಿದರು.

ರಾಷ್ಟ್ರೀಯ ಸೇವಾದಳದ ರಾಜ್ಯಾಧ್ಯಕ್ಷರಾಗಿ ಧಾರವಾಡ ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ನೇಮಕಗೊಂಡಿದ್ದಾರೆ. ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ– ಶಂಕರ ಹಲಗತ್ತಿ (43 ಸೆಕೆಂದುಗಳು)

ಸದ್ಗುರು ಸಿದ್ಧಾರೂಢಸ್ವಾಮಿ ಅವರ 190 ನೇ ಜಯಂತ್ಯುತ್ಸವ, ಶ್ರೀ ಗುರುನಾಥರೂಢರ 115 ನೇ ಜಯಂತ್ಯುತ್ಸವ ಹಾಗೂ ಸಿದ್ಧಾರೂಢರ ಕಥಾಮೃತದ ಶತಮಾನೋತ್ಸವ ಕಾರ್ಯಕ್ರಮ ಹುಬ್ಬಳ್ಳಿಯಲ್ಲಿ ಇದೇ ತಿಂಗಳ 19 ರಿಂದ 26 ರವರೆಗೆ ಆಯೋಜಿಸಲಾಗಿದೆ ಎಂದು ಶ್ರೀ ಸಿದ್ಧಾರೂಢ ಮಠದ ಟ್ರಸ್ಟ ಕಮಿಟಿ ಚೇರಮನ್ ಬಸವರಾಜ ಕಲ್ಯಾಣ ಶೆಟ್ಟರ್ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಅವರು, ಕಳೆದ ಡಿಸೆಂಬರ್ 23 ರಂದು ಸಿದ್ಧಾರೂಢರ ಜನ್ಮ ಸ್ಥಳ ಚಳಕಾಪುರದಿಂದ ಆರಂಭಗೊಂಡಿರುವ ಆರೂಢ ಜ್ಯೋತಿ ಮೆರವಣಿಗೆ ಆಂಧ್ರಪ್ರದೇಶ, ಮಹಾರಾಷ್ಟ್ರ, ಗೋವಾ ಮತ್ತು ಕರ್ನಾಟಕದ 16 ಜಿಲ್ಲೆಗಳಲ್ಲಿ ಸಂಚರಿಸಿ ನಾಳೆ ಹುಬ್ಬಳ್ಳಿಗೆ ಆಗಮಿಸಲಿದೆ ಎಂದರು. ಶಿವರಾತ್ರಿ ಮಹೋತ್ಸವದ ಅಂಗವಾಗಿ ಫೆಬ್ರವರಿ 26 ರಿಂದ ಮಾರ್ಚ 1 ರ ವರೆಗೆ ಸಿದ್ಧಾರೂಢಸ್ವಾಮಿ ಜಾತ್ರಾ ಮಹೋತ್ಸವ ನಡೆಯಲಿದೆ. ಫೆಬ್ರವರಿ 27 ರಂದು ಸಂಜೆ ಅದ್ದೂರಿ ರಥೋತ್ಸವ ಆಯೋಜಿಸಲಾಗಿದೆ ಎಂದು ಹೇಳಿದರು.

ನಾಡಿನ ರಂಗ ಸಂಸ್ಕೃತಿಯನ್ನು ಶ್ರೀಮಂತಗೊಳಿಸುವ ಪರಿಕಲ್ಪನೆಯಲ್ಲಿ ಬಹುಸಾಂಸ್ಕೃತಿಕ ನೆಲೆಯ ಬೇರೆ ಬೇರೆ ಭಾಷೆಯ ನಾಟಕಗಳನ್ನು ಪ್ರದರ್ಶಿಸುವ ಮೂಲಕ ರಂಗಾಯಣವು ರಂಗಭೂಮಿಯನ್ನು ವಿಸ್ತರಿಸುತ್ತಿದೆ ಎಂದು ರಂಗ ಸಮಾಜದ ಸದಸ್ಯರಾದ ಮಹಾಂತೇಶ ಗಜೇಂದ್ರಗಡ ಹೇಳಿದ್ದಾರೆ. ಧಾರವಾಡ ರಂಗಾಯಣವು, ಪಂಡಿತ ಬಸವರಾಜ ರಾಜಗುರು ಬಯಲು ರಂಗಮಂದಿರದಲ್ಲಿ ಆಯೋಜಿಸಿದ್ದ "ರಂಗಾಂತರಂಗ–2025" ಬಹುಭಾಷಾ ನಾಟಕೋತ್ಸವ"ದ ಮೂರನೇ

ದಿನದ ನಾಟಕಕ್ಕೆ ನಿನ್ನೆ ಚಾಲನೆ ನೀಡಿ, ಮಾತನಾಡಿದ ಅವರು. ಬಿ.ವಿ ಕಾರಂತರ ಆಶಯದಂತೆ ಆರಂಭವಾದ ರಂಗಾಯಣಗಳು ರಂಗ ಚಟುವಟಿಕೆಗಳನ್ನು ವಿಸ್ತರಿಸಿ, ರಂಗಭೂಮಿಗೆ ಪೂರಕ ವಾತಾವರಣ ನಿರ್ಮಿಸುತ್ತಿವೆ. ಹಲವಾರು ವಿಭಿನ್ನ ನಾಟಕೋತ್ಸವ ಹಾಗೂ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿವೆ. ಧಾರವಾಡ ರಂಗಾಯಣವು ಕನ್ನಡ ಮಾತ್ರವಲ್ಲದೇ ಹಿಂದಿ, ಮಲೆಯಾಳಂ, ಮರಾಠಿ ನಾಟಕಗಳ ಪ್ರದರ್ಶನಕ್ಕೆ ಅವಕಾಶ ನೀಡುವ ಮೂಲಕ ರಂಗಭೂಮಿಗೆ ಹೊಸತನವನ್ನು ತಂದಿದೆ ಎಂದರು.

ಧಾರವಾಡ ರಂಗಾಯಣ ಆಯೋಜಿಸಿರುವ 6 ದಿನಗಳ ಬಹುಭಾಷಾ ನಾಟಕೋತ್ಸವದ ನಾಲ್ಕನೇ ದಿನವಾದ ಇಂದು ಸಂಜೆ 6.30 ಕ್ಕೆ ಪಂಡಿತ ಬಸವರಾಜ ರಾಜಗುರು ಬಯಲು ರಂಗಮಂದಿರದಲ್ಲಿ ಧಾರವಾಡ ರಂಗಾಯಣದ ತಾತ್ಕಾಲಿಕ ರೆಪರ್ಟರಿ ಕಲಾವಿದರಿಂದ, ಜಿ.ಬಿ.ಜೋಶಿ ಅವರು ರಚಿಸಿದ ಹುಲಗಪ್ಪ ಕಟ್ಟಿಮನಿ ನಿರ್ದೇಶನದ 'ಸತ್ತವರ ನೆರಳು' ನಾಟಕ ಪ್ರದರ್ಶನಗೊಳ್ಳಲಿದೆ.

ಅರೆಭಾಷಾ ಸಾಹಿತ್ಯ, ಸಂಸ್ಕೃತಿ ಮತ್ತು ಅದರ ಬೆಳವಣಿಗೆಯಲ್ಲಿ ಗಣನೀಯ ಸಾಧನೆಗೈದ ಆರು ಸಾಧಕರು, ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾದೆಮಿಯ ಗೌರವ ಪ್ರಶಸ್ತಿಗೆ ಭಾಜನರಾಗಿದ್ದಾರೆ ಎಂದು ಅರೆಭಾಷಾ ಅಕಾದೆಮಿ ಅಧ್ಯಕ್ಷ ಸದಾನಂದ ಮಾವಜಿ ತಿಳಿಸಿದ್ದಾರೆ. ಮಡಿಕೇರಿಯಲ್ಲಿ ಸುದ್ದಿಗಾರರಿಗೆ ಈ ಮಾಹಿತಿ ನೀಡಿದ ಅವರು, 'ಸಂಶೋಧನೆ ಮತ್ತು ಅರೆಭಾಷೆ ಸಾಹಿತ್ಯ' ಕ್ಷೇತ್ರದ ಸಾಧನೆಗಾಗಿ – ಕೊಡಗಿನ ಡಾಕ್ಟರ್ ಕಾವೇರಿಮನೆ ಬೋಜಪ್ಪ, 'ಅರೆಭಾಷೆ ಮತ್ತು ಸಂಸ್ಕೃತಿಯ ಸೇವೆ'ಗಾಗಿ – ತುಂತಜೆ ವೆಂಕಟೇಶ್, 'ಶಿಕ್ಷಣ ಮತ್ತು ವೈದ್ಯಕೀಯ ಸೇವೆ'ಗಾಗಿ – ದಕ್ಷಿಣ ಕನ್ನಡ ಜಿಲ್ಲೆಯ ಡಾಕ್ಟರ್ ಕೆ.ವಿ.ಚಿದಾನಂದ ಅವರು 2022 ನೇ ಸಾಲಿನ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ ಎಂದರು.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.